| | | | |
|---|---|---|---|
| 3 | ಜಿಲ್ಲಾ ಆಯುಷ್ ಇಲಾಖೆ | ಜಿಲ್ಲಾ ವೈದ್ಯಾಧಿಕಾರಿಗಳು, ಆಯುಷ್ ಇಲಾಖೆ, ಹಾಸನ ಇವರು ಮಾತನಾಡುತ್ತಾ, 2011–12ನೇ ಸಾಲಿನಲ್ಲಿ ಕಟ್ಟಡಗಳು ಯೋಜನೆಯಡಿಯಲ್ಲಿ ಬೇಲೂರು ತಾ; ಸಾಣೇನಹಳ್ಳಿ ಮತ್ತು ಅರಕಲಗೂಡು ತಾ: ಎ.ಬಿ.ಹಳ್ಳಿಯಲ್ಲಿ ಆಯುರ್ವೇದ ಆಸ್ಪತ್ರೆಗಳಿಗೆ ಹೊಸದಾಗಿ ಕಟ್ಟಡ ನಿರ್ಮಿಸಲು ಕ್ರಿಯಾ ಯೋಜನೆಯಲ್ಲಿ ಸೇರಿಸಲಾಗಿದ್ದು, ಸಾಣೇನಹಳ್ಳಿಯಲ್ಲಿ ಕಟ್ಟಡ ಪ್ರಾರಂಭವಾಗಿದೆ. ಆದರೆ, ಎ.ಬಿ.ಹಳ್ಳಿಯಲ್ಲಿ ಕಟ್ಟಡ ಕಾಮಗಾರಿಯನ್ನು ಪ್ರಾರಂಭ ಮಾಡಿರುವುದಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಮಾತನಾಡುತ್ತಾ, ಕಟ್ಟಡ ಕಾಮಗಾರಿಗಳನ್ನು ತ್ವರಿತವಾಗಿ ಪ್ರಾರಂಭಿಸುವ ಬಗ್ಗೆ ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು. | ಸಭೆಯಲ್ಲಿ ಆಯುಷ್ ಇಲಾಖೆಯ ಕಾರ್ಯಕ್ರಮಗಳ ಬಗ್ಗೆ ಪರಿಶೀಲಿಸಲಾಯಿತು ಮತ್ತು ಅಗತ್ಯ ಕ್ರಮ ವಹಿಸುವಂತೆ ಜಿಲ್ಲಾ ವೈದ್ಯಾಧಿಕಾರಿಗಳು, ಜಿಲ್ಲಾ ಆಯುಷ್ ಇಲಾಖೆ ರವರಿಗೆ ತಿಳಿಸಲಾಯಿತು. |
| 4 | ಕುಡಿಯುವ ನೀರಿನ ಯೋಜನೆ | ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟರವರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನೆಗಳಿಗೆ ಸಂಬಂಧಿಸಿದಂತೆ ಟೆಂಡರ್ ಅಂತಿಮಗೊಳಿಸಿ ಕಾರ್ಯಾದೇಶ ನೀಡಿದಾಗ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತರಲು ಕ್ರಮ ವಹಿಸಬೇಕೆಂದು ಕೋರಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನೆಗಳಿಗೆ ಸಂಬಂಧಿಸಿದಂತೆ, ಜಿಲ್ಲೆಗೆ ರೂ.20.00ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಿದ್ದು, ಸುಮಾರು ರೂ.13.00ಕೋಟಿಗಳ ಅನುದಾನವನ್ನು ವಿನಿಯೋಗಿಸಲಾಗಿದೆ. ದಿ: 31–03–2012ರವರೆಗೆ ಇನ್ನೂ 8.00ಕೋಟಿಗಳಷ್ಟು ಅನುದಾವನ್ನು ವಿನಿಯೋಗಿಸಲು ಕ್ರಮ ವಹಿಸಲಾಗುತ್ತಿದೆ. ಓವರ್ ಹೆಡ್ ಟ್ಯಾಂಕ್ ಕಾಮಗಾರಿಗಳಿಗೆ ಸಂಬಂಧಿಸಿದಂತೆ, ಗುತ್ತಿಗೆದಾರರು ಟೆಂಡರ್ ಹಾಕದೇ ಇರುವುದರಿಂದ, ಸದರಿ ಕಾಮಗಾರಿಗಳ ಅನುದಾನವನ್ನು ವಿನಿಯೋಗಿಸಲು ಸಾಧ್ಯವಾಗುತ್ತಿಲ್ಲ.<br>ಮಾನ್ಯ ಸಮಿತಿ ಸದಸ್ಯರುಗಳು ಓವರ್ ಹೆಡ್ ಟ್ಯಾಂಕ್ ಕಾಮಗಾರಿಗಳಿಗೆ ಸಂಬಂಧಿಸಿದಂತೆ, ಈಗಿರುವ ದರವು ಬಹಳ ಕಡಿಮೆಯಾಗಿದ್ದು, ಪರಿಷ್ಕೃತ ದರದಲ್ಲಿ ಅಂದಾಜು ಪಟ್ಟಿಯನ್ನು ಸಿದ್ದಪಡಿಸಲು ಕ್ರಮ ವಹಿಸಬೇಕೆಂದು ಕೋರಿದರು. | ಸಭೆಯಲ್ಲಿ ಕುಡಿಯುವ ನೀರಿನ ಯೋಜನೆಗಳ ಬಗ್ಗೆ ವಿವರವಾಗಿ ಪರಿಶೀಲಿಸಲಾಯಿತು ಮತ್ತು ಅಗತ್ಯ ಕ್ರಮ ವಹಿಸುಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಲಾಯಿತು. |
| | ಮತ್ಯಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನೆಲೆಯಲ್ಲಿ ವಂದನಾರ್ಪಣೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | | |

M.V. Hemavathi

(ಎಂ.ವಿ.ಹೇಮಾವತಿ)

ಅಧ್ಯಕ್ಷರು

ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ

ಜಿಲ್ಲಾ ಪಂಚಾಯಿತಿ, ಹಾಸನ

| | | | |
|---|---|---|---|
| | | ಹೊರಗುತ್ತಿಗೆ ಆಧಾರದಲ್ಲಿ ಇಂಜಿನಿಯರ್ ನೇಮಕವಾಗಿರುತ್ತಾರೆ. ಆದರೆ, ಸಮರ್ಪಕವಾಗಿ ಕೆಲಸವನ್ನು ನಿರ್ವಹಿಸುವುದಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>2011–12ನೇ ಸಾಲಿನ ಸೇರ್ಪಡೆ [redacted] ಯೋಜನೆಯಡಿಯಲ್ಲಿ [redacted] ಅನುದಾನವನ್ನು ವಿನಿಯೋಗಿಸುವುದಾಗಿ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಇವರು ಸಭೆಗೆ ಮಾಹಿತಿ ನೀಡಿದರು.<br>ಆರ್.ಎಂ.ಎಸ್. ಯೋಜನೆಯಡಿ ಪ್ರೌಢಶಾಲೆಗಳಿಗೆ ಹೊಸದಾಗಿ ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಾಗ ಕ್ಷೇತ್ರ ಶಿಕ್ಷಣಾಧಿಕಾರಿಯವರು ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ [redacted] ತಂದು ಅವರಿಂದ ಶಾಲೆಗಳ ವಿವರಗಳನ್ನು [redacted] ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರಿಗೆ ಉಪ ಕಾರ್ಯದರ್ಶಿ(ಆಡಳಿತ)ರವರು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಮಾತನಾಡುತ್ತಾ, ಆರ್.ಐ.ಡಿ.ಎಫ್ ಯೋಜನೆಯಡಿ ಮಂಜೂರಾದ ಶಾಲಾ ಕಟ್ಟಡಗಳನ್ನು ಪೂರ್ಣಗೊಳಿಸದೇ ಇದ್ದಲ್ಲಿ ಸಂಬಂಧಪಟ್ಟ ಗುತ್ತಿಗೆದಾರರಿಗೆ ನೋಟೀಸು ಜಾರಿ ಮಾಡಿ ಕಟ್ಟಡಗಳನ್ನು ಪೂರ್ಣಗೊಳಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು. | |
| 2 | ಅರೋಗ್ಯ ಇಲಾಖೆ | 2011–12ನೇ ಸಾಲಿನಲ್ಲಿ ಕಟ್ಟಡಗಳು ಯೋಜನೆಯಡಿಯಲ್ಲಿ ದುರಸ್ಥಿ ಮಾಡಿರುವ ಕಾಮಗಾರಿಗಳ ಬಗ್ಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಪರಿಶೀಲನೆ ನಡೆಸಬೇಕೆಂದು ಉಪ ಕಾರ್ಯದರ್ಶಿ(ಆಡಳಿತ)ರವರು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಮಂಜಮ್ಮ ಹೆಚ್.ಬಿ ರವರು ಮಾತನಾಡುತ್ತಾ, ದೇವಾಲದಕೆರೆ ಶುಶ್ರೂಷಕಿಯ ವಸತಿ ಗೃಹವನ್ನು ಇಲಾಖೆಯ ವಶಕ್ಕೆ ನೀಡಿರುವುದಿಲ್ಲವೆಂದು ವೈದ್ಯಾಧಿಕಾರಿಗಳು ತಿಳಿಸಿದ್ದು, ಈ ಬಗ್ಗೆ ಪರಿಶೀಲನೆ ನಡೆಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರಿಗೆ ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟರವರು ಮಾತನಾಡುತ್ತಾ, ಪ್ರಾಥಮಿಕ ಆರೋಗ್ಯ ಘಟಕವನ್ನು ಪ್ರಾಥಮಿಕ ಆರೋಗ್ಯ ಕೇಂದ್ರವನ್ನಾಗಿ ಉನ್ನತೀಕರಿಸಲಾಗಿದ್ದು, ಔಷಧಿಗಳನ್ನು ಅಗತ್ಯ ಪ್ರಮಾಣದಲ್ಲಿ ಸರಬರಾಜು ಮಾಡಿರುವುದಿಲ್ಲವೆಂದು ಮತ್ತು ಸಿಬ್ಬಂದಿಯನ್ನು ನೇಮಕ ಮಾಡಿರುವುದಿಲ್ಲ. ಈ ಬಗ್ಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಪರಿಶೀಲಿಸಿ ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು. | ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳ ಬಗ್ಗೆ ಸಭೆಯಲ್ಲಿ ಸಮಗ್ರವಾಗಿ ಪರಿಶೀಲಿಸಲಾಯಿತು.<br>ಸಭೆಯಲ್ಲಿ ಪರಿಶೀಲಿಸಿ ವಿಷಯಗಳ ಮೇಲೆ ಅಗತ್ಯ ಕ್ರಮ ವಹಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರಿಗೆ ತಿಳಿಸಲಾಯಿತು. |

ದಿನಾಂಕ: 26-03-2012ರಂದು ಅಪರಾಹ್ನ: 03-00 ಗಂಟೆಗೆ ಹೊಯ್ಸಳ ಸಭಾಂಗಣ, ಹಾಸನ ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳು

ಅಧ್ಯಕ್ಷತೆ: ಶ್ರೀಮತಿ ಎಂ.ವಿ.ಹೇಮಾವತಿ

ಅಧ್ಯಕ್ಷರು

ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ

ಹಾಜರಿ:06

ಗೈರು ಹಾಜರಿ:0[illegible]

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಉಪ ಕಾರ್ಯದರ್ಶಿ (ಆಡಳಿತ)ರವರು ಮೊದಲಿಗೆ ಸಭೆಯಲ್ಲಿ ಹಾಜರಿದ್ದ ಮಾನ್ಯ ಸ್ಥಾಯಿ ಸಮಿತಿ ಸದಸ್ಯರು, ವಿವಿಧ ಇಲಾಖಾಧಿಕಾರಿಗಳನ್ನು ಸ್ವಾಗತಿಸುತ್ತಾ, ಸಭೆಗೆ ಅಧ್ಯಕ್ಷರನ್ನು ಆಯ್ಕೆ ಮಾಡಬೇಕೆಂದು ಸಮಿತಿ ಸದಸ್ಯರನ್ನು ಕೋರಿದರು.<br>ಶ್ರೀಮತಿ ಎಂ.ವಿ.ಹೇಮಾವತಿರವರನ್ನು ಸಮಿತಿಯ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಧ್ಯಕ್ಷರನ್ನು ಕೋರಿದರು. | |
| 1 | ಶಿಕ್ಷಣ ಇಲಾಖೆ | ಮಾನ್ಯ ಸಮಿತಿ ಅಧ್ಯಕ್ಷರು ಮಾತನಾಡುತ್ತಾ, ಅಕ್ಷರ ದಾಸೋಹ ಕಾರ್ಯಕ್ರಮದಡಿಯಲ್ಲಿ ಆಹಾರ ಪದಾರ್ಥಗಳ ಸಾಗಾಣಿಕೆಗೆ ಟೆಂಡರ್ ಕರೆದಾಗ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿಯ ಅಧ್ಯಕ್ಷರು/ಸದಸ್ಯರುಗಳ ಗಮನಕ್ಕೆ ತರಬೇಕೆಂದು ಶಿಕ್ಷಣಾಧಿಕಾರಿ, ಅಕ್ಷರ ದಾಸೋಹ, ಹಾಸನ ಇವರಿಗೆ ತಿಳಿಸಿದರು.<br>ಶಿಕ್ಷಣಾಧಿಕಾರಿ, ಅಕ್ಷರ ದಾಸೋಹ, ಹಾಸನ ಇವರು ಮಾತನಾಡುತ್ತಾ, ಆಹಾರ ಪದಾರ್ಥಗಳನ್ನು ಸಾಗಾಣಿಕಾದಾರರು ಶಾಲೆಗಳಿಗೆ ಸಮರ್ಪಕವಾಗಿ ಸರಬರಾಜು ಮಾಡುತ್ತಿಲ್ಲ. ಈ ಬಗ್ಗೆ ಕಟ್ಟುನಿಟ್ಟಿನ ನಿರ್ದೇಶನವನ್ನು ನೀಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟರವರು ಮಾತನಾಡುತ್ತಾ, ಶಾಲೆಗಳಿಗೆ ಅಕ್ಕಿಯನ್ನು ನೀಡುವಾಗ ಕಡಿಮೆಯಿರುತ್ತದೆ ಎಂದು ಆರೋಪಗಳು ಕೇಳಿಬರುತ್ತಿವೆ. ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಬೇಕೆಂದು ಕೋರಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಅಕ್ಷರ ದಾಸೋಹ ಕಾರ್ಯಕ್ರಮದಡಿ ಬಾಕಿಯಿರುವ ರೂ.1.50ಕೋಟಿಗಳ ಅನುದಾನವನ್ನು ವಿನಿಯೋಗಿಸಲು ಕ್ರಮ ವಹಿಸಬೇಕೆಂದು ಶಿಕ್ಷಣಾಧಿಕಾರಿ, ಅಕ್ಷರ ದಾಸೋಹ, ಹಾಸನ ಇವರಿಗೆ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟರವರು ಮಾತನಾಡುತ್ತಾ, ಅರೇಹಳ್ಳಿಯಲ್ಲಿ ಸರ್ವ ಶಿಕ್ಷಣ ಅಭಿಯಾನದ ವತಿಯಿಂದ ನಿರ್ಮಾಣ ಮಾಡಿರುವ ಶಾಲಾ ಕಟ್ಟಡ ಕಾಮಗಾರಿಯು ಅಪೂರ್ಣವಾಗಿದ್ದು, ಪೂರ್ಣಗೊಳಿಸಲು ಅನುದಾನ ಲಭ್ಯವಿರುವುದಿಲ್ಲವೆಂದು ತಿಳಿಸಿರುತ್ತಾರೆ. ಸರ್ವ ಶಿಕ್ಷಣ ಅಭಿಯಾನದಡಿಯಲ್ಲಿ | ಸಭೆಯಲ್ಲಿ ಶಿಕ್ಷಣ ಇಲಾಖೆಯ ಕಾರ್ಯಕ್ರಮಗಳ ಬಗ್ಗೆ ಸುದೀರ್ಘವಾಗಿ ಚರ್ಚಿಸಲಾಯಿತು ಹಾಗೂ ಅಗತ್ಯ ಕ್ರಮ ವಹಿಸುವಂತೆ ಉಪ ನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ತಿಳಿಸಲಾಯಿತು. |

10. ಉಪಕಾರ್ಯದರ್ಶಿ(ಆಡಳಿತ) ಜಿಲ್ಲಾ ಪಂಚಾಯಿತಿ, ಹಾಸನ
11. ಉಪಕಾರ್ಯದರ್ಶಿ(ಅಭಿವೃದ್ಧಿ) ಜಿಲ್ಲಾ ಪಂಚಾಯಿತಿ, ಹಾಸನ
12. ಮುಖ್ಯ ಲೆಕ್ಕಾಧಿಕಾರಿ. ಜಿಲ್ಲಾ ಪಂಚಾಯಿತಿ, ಹಾಸನ
13. ಮುಖ್ಯ ಯೋಜನಾಧಿಕಾರಿ. ಜಿಲ್ಲಾ ಪಂಚಾಯಿತಿ, ಹಾಸನ
14. ಉಪ ನಿರ್ದೇಶಕರು. ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ
15. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ಹಾಸನ
16. ಜಿಲ್ಲಾ ವೈದ್ಯಾಧಿಕಾರಿ. ಆಯುಷ್ ಇಲಾಖೆ, ಹಾಸನ
17. ಸಹಾಯಕ ನಿರ್ದೇಶಕರು. ಜಿಲ್ಲಾ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ, ಹಾಸನ
18. ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಮಾಹಿತಿಗಾಗಿ
19. ಕಾರ್ಯಪಾಲಕ ಅಭಿಯಂತರರು. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
20. ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು
21. ಉಪನಿರ್ದೇಶಕರು; ಮೂಲ ಸೌಕರ್ಯಗಳ ಇಲಾಖೆ, ಹಾಸನ
22. ಕಛೇರಿ ಪ್ರತಿ.

**<u>ಜಿಲ್ಲಾ ಪಂಚಾಯತ್, ಹಾಸನ</u>**

ಸಂಖ್ಯೆ.ಜಿ.ಪಂ.ಹಾ.ಪಶಾ/74/2011-12

ದಿನಾಂಕ 21-3-2012

**<u>ಸಭಾಹ್ವಾನ ಪತ್ರ</u>**

ದಿನಾಂಕ 26-3-2012ರಂದು ಸೋಮವಾರ ಮಧ್ಯಾಹ್ನ 3.00 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯನ್ನು ಕರೆಯಲಾಗಿದೆ. ಸದರಿ ಸಭೆಗೆ ಸದಸ್ಯರುಗಳು ಸಕಾಲಕ್ಕೆ ಹಾಜರಾಗಬೇಕೆಂದು ಕೋರಿದೆ.

ಉಪಕಾರ್ಯದರ್ಶಿ(ಆಡಳಿತ)
ಹಾಗೂ ಕಾರ್ಯದರ್ಶಿ
ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ
ಜಿಲ್ಲಾ ಪಂಚಾಯಿತಿ, ಹಾಸನ

**ಅಧ್ಯಕ್ಷರ ಅಪ್ಪಣೆ ಮೇರೆಗೆ ವಿಷಯಗಳು**

ಪ್ರತಿಯನ್ನು:

1. ಶ್ರೀ. ಸ್ವಾಮೀಗೌಡ ಸದಸ್ಯರು ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ
2. ಶ್ರೀಮತಿ ಎಂ.ವಿ. ಹೇಮಾವತಿ ಮಂಜುನಾಥ್ ಸದಸ್ಯರು ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ
3. ಶ್ರೀ ಅಮಿತ್ ಕುಮಾರ್ ಶೆಟ್ಟಿ ಸದಸ್ಯರು ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ
4. ಶ್ರೀಮತಿ ದೇವಿಕ ಸದಸ್ಯರು ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ
5. ಶ್ರೀಮತಿ ಹೆಚ್.ಬಿ.ಮಂಜಮ್ಮ ಸದಸ್ಯರು ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ
6. ಶ್ರೀ ಶಿವಶಂಕರ(ಕುಂಟೆ) ಸದಸ್ಯರು ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ
7. ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಆಪ್ತ ಶಾಖೆಗೆ ಮಾಹಿತಿಗಾಗಿ
8. ಜಿಲ್ಲಾ ಪಂಚಾಯಿತಿ ಎಲ್ಲಾ ಮಾನ್ಯ ಸದಸ್ಯರುಗಳಿಗೆ ಮಾಹಿತಿಗಾಗಿ
9. ಮಾನ್ಯ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಆಪ್ತ ಶಾಖೆಗೆ